# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2014-15ನೇ ಸಾಲಿನಿಂದ ಸರ್ ಸೈಯದ್ ಅಹ್ಮದ್ ಖಾನ್ ಅಧ್ಯಯನ ಹಾಗೂ ಸಂಶೋಧನ ಕೇಂದ್ರ (Sir Syed Ahmed Khan Study and Research Centre) ಸ್ಥಾಪಿಸುವ ಹಾಗೂ ಇದಕ್ಕೆ ಬೇಕಾಗುವ ಹುದ್ದೆಗಳನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:** 1. 2014-15ನೇ ಸಾಲಿನ ಆಯವ್ಯಯ ಭಾಷಣ.

2. ನಿರ್ದೇಶಕರು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರ ಏಕ ಕಡತದ ಪ್ರಸ್ತಾವನೆ ಸಂಖ್ಯೆ: ಅಸಂನಿ/ಸಸಅಕಕೆ/ಸಿಆರ್-02/13-14, ದಿ:26-02-14.

**ಪ್ರಸ್ತಾವನೆ:**

ಮೇಲೆ ಓದಲಾದ (1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು 2014-15ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-220ರಲ್ಲಿ ಸರ್ ಸೈಯದ್ ಅಹಮದ್ ಖಾನ್ ಅಧ್ಯಯನ ಮತ್ತು ಸಂಶೋಧನ ಕೇಂದ್ರವನ್ನು ಒಂದು ಮಾದರಿ ಕೇಂದ್ರವಾಗಿ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಸಂಶೋಧನೆ ಮತ್ತು ಮೌಲ್ಯಮಾಪನ ನಡೆಸಲು ಸ್ಥಾಪಿಸುವುದಾಗಿ ಘೋಷಣೆ ಮಾಡಿರುತ್ತಾರೆ.

ಅದರಂತೆ, ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ನಿರ್ದೇಶಕರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಸಮಾಜ ಕಲ್ಯಾಣ ಇಲಾಖೆಯಲ್ಲಿ ಡಾ|| ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ದಿವಂಗತ ಶ್ರೀ.ದೇವರಾಜ್ ಅರಸ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರಗಳ ಮಾದರಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಬಗ್ಗೆ ಹಾಗೂ ಅಲ್ಪಸಂಖ್ಯಾತರ ಸಮಸ್ಯೆಗಳ ಬಗ್ಗೆ ವಿವಿಧ ಆಯೋಗ/ಸಮಿತಿಗಳ ವರದಿಗಳ ಶಿಫಾರಸ್ಸುಗಳ ಬಗ್ಗೆ ತುಲನಾತ್ಮಕವಾಗಿ ಅಧ್ಯಯನ ಕೈಗೊಳ್ಳಲು, ಅಲ್ಪಸಂಖ್ಯಾತರ ಸಮಸ್ಯೆಗಳ ಕುರಿತಂತೆ ವಿಶೇಷ ಅಧ್ಯಯನ ಹಾಗೂ ಸಂಶೋಧನೆಯನ್ನು ಕೈಗೊಂಡು ಅಗತ್ಯ ಪರಿಹಾರವನ್ನು ಸೂಚಿಸಲು, ಹೆಣ್ಣು ಮಕ್ಕಳ ಆರ್ಥಿಕ ಸ್ಥಿತಿಗತಿ, ಸಾಮಾಜಿಕ ಸ್ಥಾನಮಾನ, ಶೈಕ್ಷಣಿಕ ಸೌಲಭ್ಯ, ಇತರೆ ಸಮಸ್ಯೆಗಳ ಬಗ್ಗೆ ವಿಶೇಷ ಅಧ್ಯಯನ ಹಾಗೂ ಸಂಶೋಧನ ಕಾರ್ಯಗಳನ್ನು ಕೈಗೊಂಡು ಅಲ್ಪಸಂಖ್ಯಾತರ ಸಾಮಾಜಿಕ ಆರ್ಥಿಕ ಸ್ಥಿತಿಯನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಪೂರಕ ಸಹಾಯ ಮತ್ತು ಮಾರ್ಗದರ್ಶನವನ್ನು ನೀಡಲು ಈ ಸಂಶೋಧನ ಕೇಂದ್ರವನ್ನು 2014-15ನೇ ಸಾಲಿನಲ್ಲಿ ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಇದಕ್ಕಾಗಿ ಅಗತ್ಯವಾದ ಈ ಕೆಳಕಂಡ ಒಟ್ಟು 21 ಹುದ್ದೆಗಳನ್ನು ಸೃಜನೆಯೊಂದಿಗೆ ಈ ಯೋಜನೆಗೆ ಬೇಕಾಗಿರುವ ರೂ.315.00 ಲಕ್ಷಗಳ ಅನುದಾನವನ್ನು ಲೆಕ್ಕಶೀರ್ಷಿಕೆ: 2225-03-001-0-03-ಆಡಳಿತ (ಯೋಜನೆ) ರಲ್ಲಿ ಮಂಜೂರು ಮಾಡಿ ಹೊಸ ಆಬ್ಜೆಕ್ಟಿವ್ ಕೋಡ್ ನೀಡುವಂತೆ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಕೋರಿರುತ್ತಾರೆ.

| ಕ್ರ.ಸಂ. | ಹುದ್ದೆ. | ಹುದ್ದೆಗಳ ಸಂಖ್ಯೆ | ವೇತನ ಶ್ರೇಣಿ |
|---|---|---|---|
| 1 | ಉಪ ನಿರ್ದೇಶಕರು | 1 | 40050-56550 |
| 2 | ಸಹಾಯಕ ನಿರ್ದೇಶಕರು | 1 | 28100-50100 |
| 3 | ಲೆಕ್ಕಾಧಿಕ್ಷಕರು | 1 | 21600-40050 |
| 4 | ಗ್ರಂಥಪಾಲಕರು | 1 | 22800-43200 |
| 5 | ಅಧೀಕ್ಷಕರು | 1 | 20000-36300 |
| 6 | ಪ್ರಥಮ ದರ್ಜೆ ಸಹಾಯಕರು | 2 | 14550-26700 |
| 7 | ಶೀಘ್ರಲಿಪಿಗಾರರು | 1 | 14550-26700 |
| 8 | ಫೀಲ್ಡ್ ಇನ್‌ವೆಸ್ಟಿಗೇಟರ್ | 1 | 14550-26700 |
| 9 | ಸಂಶೋಧನಾ ಸಹಾಯಕರು | 2 | 14550-26700 |
| 10 | ಕಂಪ್ಯೂಟರ್ ಆಪರೇಟರ್ | 2 | 14550-26700 |
| 11 | ದ್ವಿತೀಯ ದರ್ಜೆ ಸಹಾಯಕರು | 2 | 11600-21000 |
| 12 | ವಾಹನ ಚಾಲಕರು | 1 | 11600-21000 |
| 13 | 'ಡಿ' ದರ್ಜೆ ನೌಕರರು | 1 | 9600-14550 |
| | ಒಟ್ಟು | 21 | |